ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ವಿಭಾಗ
ಜಿ.ಕೆ.ವಿ.ಕೆ., ಬೆಂಗಳೂರು–560065

* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 29.09.2015

ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಮುನ್ಸೂಚನೆ (ದಿನಾಂಕ 30.09.15 –04.10.15 ವರೆಗೆ)

	30.09.15	01.10.15	02.10.15	03.10.15	04.10.15
ಮಳೆ (ಮಿ ಮಿ)	5	10	19	10	6
ಗರಿಷ್ಠ ಉಷ್ಣಾಂಶ(ಡಿ.ಸೆ.)	29	30	30	28	29
ಕನಿಷ್ಠ ಉಷ್ಣಾಂಶ (ಡಿ.ಸೆ.)	20	20	20	21	20
ಮೋಡ (ಪ್ರಮಾಣ)	5	5	4	6	7
ಆರ್ದ್ರತೆ ೭.೨೦ ಬೆ (ಶೇ)	79	83	81	81	80
ಆರ್ದ್ರತೆ ೨.೨೦ ಮ (ಶೇ)	53	53	54	63	57
ಗಾಳಿಯ ವೇಗ (ಕಿ.ಮಿ/ಗಂಟೆಗೆ)	4	5	2	3	5
ಗಾಳಿಯ ದಿಕ್ಕು (ಡಿಗ್ರಿ)	110	330	250	260	230

ಮುಂದಿನ ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಂಭವವಿದೆ. ದಿನದ ಗರಿಷ್ಠ ಉಷ್ಣಾಂಶ **28.0-30.0°C** ಮತ್ತು ಕನಿಷ್ಠ **20.0-21.0°C** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **79-83 %** ಇದ್ದು ಮಧ್ಯಾಹ್ನ **53-63 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2-5** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ತೊಗರಿಯಲ್ಲಿ ಸೊರಗು ರೋಗ ಇರುವ ಕಡೆ ಕಾರ್ಬೆಂಡೇಜಿಮ್ (1ಮಿ.ಲೀ. ಪ್ರತಿ ಲೀಟರ್ ನೀರಿಗೆ) ತೊಗರಿ ಗಿಡದ ಬುಡದಲ್ಲಿರುವ ಮಣ್ಣಿಗೆ ಸೇರಿಸುವುದು.
- **ರಸ ಹೀರುವ ಕೀಟಗಳು:** ಇವುಗಳ ಹತೋಟಿಗೆ ಶೇ. 4 ಬೇವಿನ ಎಣ್ಣೆಯನ್ನು ಸಿಂಪಡಿಸಬೇಕು. ಅಂಟು ದ್ರಾವಣವನ್ನು ಲೇಪಿಸಿದ ಹಳದಿ ಬಣ್ಣದ ಅಂಟು ಬಲೆಗಳನ್ನು ಅಲ್ಲಲ್ಲಿ ಇಡುವುದರಿಂದ ಬಿಳಿನೊಣ, ರೆಕ್ಕೆ ಇರುವ ಏಫಿಡ್ಸ್ ಹಾಗೂ ಇನ್ನಿತರೆ ಕೀಟಗಳು ಆ ಬಲೆಗೆ ಅಂಟಿಕೊಳ್ಳುತ್ತವೆ.
- ಶಕ್ತಿಮಾನ್ ಜೋಳದ ತಳಿಗಳಾದ ಡೆಕ್ಕನ್–103, ವಿಜಯ ಕಾಂಪೋಸಿಟ್ ಮತ್ತು ಗಂಗಾ–11 ತಳಿಗಳನ್ನು ಆಯ್ಕೆ ಮಾಡಿಕೊಳ್ಳಬಹುದು. ಅಲಸಂದೆ ಬೆಳೆಯಲ್ಲಿ ಸಿ–152 ಮತ್ತು ಕೆ.ಎಮ್–5, ಅಥವಾ ತರಕಾರಿಗಾಗಿ ಪಿ.ಕೆ.ಬಿ–4 ತಳಿಯನ್ನು ಆಯ್ಕೆ ಮಾಡಿಕೊಳ್ಳಬಹುದು.
- ಅಲ್ಪಾವಧಿ ಬೆಳೆಗಳಾದ ಹುರುಳಿ, ಅಲಸಂದೆ, ಸಜ್ಜೆ, ಉದ್ದು, ನವಣೆ, ಸಾಮೆ, ಹೆಸರು ಬೆಳೆಗಳನ್ನು ಬೆಳೆಯಬಹುದು

ನೋಡಲ್ ಅಧಿಕಾರಿ:
ಕೃ.ವಿ.ವಿ, ಜಿ.ಕೆ.ವಿ.ಕೆ
ಬೆಂಗಳೂರು